# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ: ಇಡಿ/ಕೆಇಎ/ನೇ.ವಿ/KSLSA/2026 ದಿನಾಂಕ: 11.05.2026

**ಪ್ರಕಟಣೆ**

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಧಿಸೂಚನೆ ಸಂಖ್ಯೆ: ಕರಾಕಾಸೇಪ್ರಾ:03/ಎಡಿಎಂ/ಎಸ್‌ಓ/2026 ದಿನಾಂಕ: 16.04.2026 ರಲ್ಲಿ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ-ಕರ್ನಾಟಕ ವೃಂದದಲ್ಲಿ ಖಾಲಿಯಿರುವ ಒಟ್ಟಾರೆ 19 ಗ್ರೂಪ್-ಬಿ ವೃಂದದ ಶಾಖಾಧಿಕಾರಿ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು.

ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ರವರ ಪತ್ರ ಸಂಖ್ಯೆKSLSA:03/ಎಡಿಎಂ/ಎಸ್‌ಓ/2026, ದಿನಾಂಕ: 08.05.2026 ರಲ್ಲಿ, ಸರ್ಕಾರದ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 27.04.2026 ರನ್ವಯ ಸರ್ಕಾರದ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿಗೆ ನಿಗದಿಪಡಿಸಿರುವ ಶೇಕಡ 15 ರಷ್ಟು ಮೀಸಲಾತಿಯನ್ನು ಪ್ರವರ್ಗ-ಎ, ಪ್ರವರ್ಗ-ಬಿ, ಪ್ರವರ್ಗ-ಸಿ ಒಳ ಮೀಸಲಾತಿಯನ್ನು ಕ್ರಮವಾಗಿ 5.25, 5.25, 4.50 ಪ್ರಮಾಣದಲ್ಲಿ ಅನುಷ್ಠಾನಗೊಳಿಸಲು ನಿರ್ದೇಶಿಸಿ, ಒಳ ಮೀಸಲಾತಿ ಅಳವಡಿಸದೇ ಹೊರಡಿಸಿರುವ ಎಲ್ಲಾ ನೇಮಕಾತಿ ಅಧಿಸೂಚನೆ ಹಿಂಪಡೆದು ಒಳ ಮೀಸಲಾತಿ ಅಳವಡಿಸಿಕೊಂಡು ಪರಿಷ್ಕೃತ ಅಧಿಸೂಚನೆಗಳನ್ನು ಹೊರಡಿಸಲು ನಿರ್ದೇಶಿಸಿರುತ್ತದೆ. ಅದರಂತೆ ದಿನಾಂಕ: 16.04.2026 ರ ಅಧಿಸೂಚನೆಗಳನ್ನು ಹಿಂಪಡೆಯಲು ಕೋರಲಾಗಿರುತ್ತದೆ. ಈ ಹಿನ್ನಲೆಯಲ್ಲಿ ದಿನಾಂಕ: 16.04.2026 ರ ಅಧಿಸೂಚನೆಗಳನ್ನು ಹಿಂಪಡೆಯಲಾಗಿದೆ. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಸರ್ಕಾರದ ಆದೇಶದಂತೆ ಒಳ ಮೀಸಲಾತಿ ಅಳವಡಿಸಿಕೊಂಡು ಪರಿಷ್ಕೃತ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಪ್ರಕಟಿಸಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in